# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 592 |
| ಸದಸ್ಯರ ಹೆಸರು | : | ಶ್ರೀ ಶರವಣ ಟಿ.ಎ |
| ಉತ್ತರಿಸುವ ದಿನಾಂಕ | : | 23-12-2022 |
| ಉತ್ತರಿಸುವ ಸಚಿವರು | : | ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪರಿಶಿಷ್ಟ ಪಂಗಡಗಳಿಗೆ ನಾಗಮೋಹನದಾಸ್ ವರದಿಯ ಶಿಫಾರಸ್ಸಿನ ಅನ್ವಯ ಮೀಸಲಾತಿ ಹೆಚ್ಚಳಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು) | ಶ್ರೀ ಹೆಚ್.ಎನ್. ನಾಗಮೋಹನ್ ದಾಸ್ ಇವರ ವರದಿಯ ಶಿಫಾರಸ್ಸಿನನ್ವಯ ರಾಜ್ಯ ಸರ್ಕಾರದಿಂದ ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧ್ಯಾದೇಶ, 2022 ದಿನಾಂಕ:23.10.2022ರಂತೆ ಪರಿಶಿಷ್ಟ ಜಾತಿಗೆ ಶೇ. 15% ರಿಂದ ಶೇ. 17%ಕ್ಕೆ ಮತ್ತು ಪರಿಶಿಷ್ಟ ಪಂಗಡಕ್ಕೆ ಶೇ.3% ರಿಂದ ಶೇ.7%ಕ್ಕೆ ಮೀಸಲಾತಿ ಹೆಚ್ಚಿಸಲಾಗಿದೆ. ನಂತರ ಅಧಿಸೂಚನೆಯನ್ನು ಹೊರಡಿಸಿ ದಿನಾಂಕ: 01-11-2022 ರಿಂದ ಜಾರಿಗೆ ತರಲಾಗಿದೆ. |
| ಆ) | ಇದಕ್ಕೆ ಸಂವಿಧಾನ ಬದ್ಧ ಮಾನ್ಯತೆ ಸಿಗಲು ಸಂಸತ್ತಿನಲ್ಲಿ ಕಾಯಿದೆಗೆ ತಿದ್ದುಪಡಿ ಅಗತ್ಯವಿದ್ದು ಈ ನಿಟ್ಟಿನಲ್ಲಿ ಯಾವ ಬೆಳವಣಿಗೆ ನಡೆದಿದೆ; ಈ ಬಗ್ಗೆ ಕೇಂದ್ರಕ್ಕೆ ರಾಜ್ಯ ಸರ್ಕಾರ ಮನವರಿಕೆ ಮಾಡಿದೆಯೇ; | ಜಸ್ಟೀಸ್ ಶ್ರೀ ಹೆಚ್.ಎನ್. ನಾಗಮೋಹನ್ ದಾಸ್ ರವರು ನೀಡಿರುವ ವರದಿಯನ್ವಯ ಮೀಸಲಾತಿ ಹೆಚ್ಚಳವನ್ನು ಶೆಡ್ಯೂಲ್-9 ನಲ್ಲಿ ಸೇರ್ಪಡೆಗೊಳಿಸಿ ಸಂರಕ್ಷಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುವ ಹಿನ್ನೆಲೆಯಲ್ಲಿ ಈಗಾಗಲೇ ಸುಗ್ರೀವಾಜ್ಞೆ ಮೂಲಕ ಸರ್ಕಾರ ಹೊರಡಿಸಿರುವ ಮೀಸಲಾತಿ ಹೆಚ್ಚಳದ ಆದೇಶವನ್ನು ಚಳಿಗಾಲದ ಅಧಿವೇಶನದಲ್ಲಿ ಬಿಲ್ ಮೂಲಕ ಮಂಡಿಸಿ ಉಭಯ ಸದನಗಳಲ್ಲಿ ಅನುಮೋದನೆ ಪಡೆದು ಶೆಡ್ಯೂಲ್-9 ನಲ್ಲಿ ಸೇರ್ಪಡೆಗೊಳಿಸಿ ಸಂರಕ್ಷಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮವಹಿಸಲಾಗುವುದು. |
| ಇ) | ಇಂದಿರ ಸಹನಿ ಪ್ರಕರಣದಲ್ಲಿ ಮೀಸಲಾತಿ ಶೇಕಡ 50 ಮೀರಬಾರದು ಎಂದು ಸುಪ್ರೀಂ ಕೋರ್ಟ್ ಆದೇಶವಿದ್ದು, ಈ ಮೀಸಲಾತಿ ಜಾರಿಗೆ ಬಂದರೆ ಒಟ್ಟು ಮೀಸಲಾತಿ ಶೇಕಡ 56 ಆಗುವುದರಿಂದ ನ್ಯಾಯಾಲಯಕ್ಕೆ ಹೇಗೆ ಮನವರಿಕೆ ಮಾಡಿ ಕೊಡಲಾಗುವುದು? | ಸರ್ವೋಚ್ಚ ನ್ಯಾಯಾಲಯದ 9 ನ್ಯಾಯಾಧೀಶರನ್ನೊಳಗೊಂಡ ಇಂದಿರಾ ಸಹಾನಿ ಪ್ರಕರಣದಲ್ಲಿ ಮೀಸಲಾತಿ ಪ್ರಮಾಣ ಶೇ.50 ನ್ನು ಮೀರಿರಬಾರದೆಂದು ಹೇಳಿದ್ದು ಆದರೆ ಕೆಲವೊಂದು ವಿಶೇಷ ಸಂಧರ್ಭಗಳನ್ನು ಹೊರತುಪಡಿಸಿದರೆ ಶೇ.50 ರಷ್ಟು ಮೀಸಲಾತಿ ಪ್ರಮಾಣ ಮೀರಬಾರದೆಂದು ಆದೇಶಿಸಲಾಗಿರುತ್ತದೆ.<br><br>ವಿಶೇಷ ಸಂದರ್ಭ ಎಂಬುವುದಕ್ಕೆ ಸಂಬಂಧಿಸಿದಂತೆ ಮೀಸಲಾತಿ ಪ್ರಮಾಣವನ್ನು ಹೆಚ್ಚಿಸಲು ಸಮುದಾಯಗಳ ಜನಸಂಖ್ಯೆ ನಿಖರ ಅಂಕಿ ಅಂಶಗಳು ಹಾಗೂ ಸಮುದಾಯಗಳ ಸಾಮಾಜಿಕ ಹಿಂದುಳಿಯುವಿಕೆ ಇರುವ ಹಿನ್ನೆಲೆಯಲ್ಲಿ ಮೀಸಲಾತಿ ಪ್ರಮಾಣವನ್ನು ಹೆಚ್ಚಿಸಲಾಗಿದೆ. |

ಸಕಇ 507 ಎಸ್‌ಟಿಪಿ 2022

(ಬಿ. ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು